ಕನ್ನಡಪ್ರಭ
ಗುರುವಾರ 7.05.2026

ಗರಿಷ್ಠ 34°c | ಕನಿಷ್ಠ 24°c

ಸುದ್ದಿ ಸಿಂಚನ

ಪಕ್ಷಿಗಳಿಗೆ ನೀರಿನ ತೊಟ್ಟಿ ಇಡುವ ಕಾರ್ಯಕ್ರಮ

ಮುಂಡರಗಿ: ಪಟ್ಟಣದ ಸ್ವಾಮಿ ವಿವೇಕಾನಂದ ಶಾಲೆಯ ಆವರಣದಲ್ಲಿರುವ 60ಕ್ಕೂ ಹೆಚ್ಚು ಮರಗಳಲ್ಲಿ ಬೇಸಿಗೆ ಹಿನ್ನೆಲೆ ಪಕ್ಷಿಗಳಿಗೆ ಕುಡಿಯುವ ನೀರಿನ ಅನುಕೂಲತೆಗಾಗಿ ನೀರು ತುಂಬಿದ ತೊಟ್ಟಿಗಳನ್ನು ಕಟ್ಟಿ ಕಾಳುಗಳನ್ನು ಇಡುವ ಕಾರ್ಯಕ್ರಮವನ್ನು ಮೇ 7ರಂದು ಬೆಳಗ್ಗೆ 9.30ಕ್ಕೆ ಹಮ್ಮಿಕೊಳ್ಳಲಾಗಿದೆ. ಮುಖ್ಯ ಅತಿಥಿಗಳಾಗಿ ಕೃಷಿ ಪಂಡಿತ ಪ್ರಶಸ್ತಿ ಪುರಸ್ಕೃತ ಈಶ್ವರಪ್ಪ ಹಂಚಿನಾಳ, ಸಿಂಗಟಾಲೂರು ವೀರಭದ್ರೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷ ಕರಬಸಪ್ಪ ಹಂಚಿನಾಳ, ಕಪ್ಪತ್ ಹಿಲ್ಸ್ ವಲಯ ಅರಣ್ಯಾಧಿಕಾರಿ ಮಂಜುನಾಥ ಮೇಗಳಮನಿ, ಶೇಖರಗೌಡ ಪಾಟೀಲ, ಸಿ.ಎಸ್. ಅರಸನಾಳ, ದೇವರಡ್ಡಿ ಇಮ್ರಾಪೂರ, ಗುಡದೀರಪ್ಪ ಲಿಂಗಶೆಟ್ಟರ ಅವರು ಮಕ್ಕಳಿಗೆ ತಿಳಿವಳಿಕೆ ನೀಡುವರು.

10ರಂದು ಹೇಮರಡ್ಡಿ ಮಲ್ಲಮ್ಮ ಜಯಂತಿ

ಗದಗ: ಜಿಲ್ಲಾಡಳಿತ, ಜಿಪಂ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮ ಮೇ 10ರಂದು ಬೆಳಗ್ಗೆ 10.30ಕ್ಕೆ ನಗರದ ಕೆ.ಎಚ್. ಪಾಟೀಲ ಸಭಾಭವನದ ಎಪಿಎಂಸಿ ಯಾರ್ಡನಲ್ಲಿ ನಡೆಯಲಿದೆ.

ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ ಎಸ್. ತಂಗಡಗಿ ಘನ ಉಪಸ್ಥಿತಿ ವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸಿ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ವಿಧಾನಪರಿಷತ್ ಸದಸ್ಯ ಸಲೀಂ ಅಹ್ಮದ್, ಶಾಸಕ ಜಿ.ಎಸ್. ಪಾಟೀಲ, ಸಂಸದರಾದ ಬಸವರಾಜ ಬೊಮ್ಮಾಯಿ, ಪಿ.ಸಿ.ಗದ್ದಿಗೌಡರ, ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಇತರರು ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

9ರಿಂದ ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನ

ಗದಗ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಎಂ.ಎಸ್. ಹುಲ್ಲೂರ ಎ1 ಹೈಟೆಕ್ ಕೋಚಿಂಗ್ ಸೆಂಟರ್ ಸಹಯೋಗದಲ್ಲಿ ಎರಡು ದಿನಗಳ ಮಕ್ಕಳ ಸಾಹಿತ್ಯ ಸಮ್ಮೇಳನ ಮೇ 9 ಹಾಗೂ 10ರಂದು ನಗರದ ವಿಜಯ ಲಲಿತಕಲಾ ಮಹಾವಿದ್ಯಾಲಯದಲ್ಲಿ ನಡೆಯಲಿದೆ.

ಸಮ್ಮೇಳನದಲ್ಲಿ ಮಕ್ಕಳ ಸಾಹಿತಿಗಳ ಸಮಾವೇಶ, ಕವಿಗೋಷ್ಠಿ, ಕತೆ ರಚನೆ, ಕಾವ್ಯ ರಚನೆ, ಚಿತ್ರ ರಚನೆ, ಕರಕುಶಲ ಕಲೆ, ಭಾಷಾ ಆಟಗಳು ಮುಂತಾದ ಪ್ರಾಯೋಗಿಕ ಚಟುವಟಿಕೆಗಳು ಜರುಗಲಿವೆ. ಈ ಚಟುವಟಿಕೆಗಳಲ್ಲಿ ಭಾಗವಹಿಸಲು ಇಚ್ಛಿಸುವ 10ರಿಂದ 18 ವಯೋಮಾನದ ವಿದ್ಯಾರ್ಥಿಗಳು ತಮ್ಮ ಹೆಸರನ್ನು ಮೊ. 9845304504, 9483657131 ನೋಂದಾಯಿಸಲು ಪ್ರಕಟಣೆಯಲ್ಲಿ ತಿಳಿಸಿದೆ.

ಜಿಟಿಟಿಸಿ: ತರಬೇತಿಗೆ ಅರ್ಜಿ ಆಹ್ವಾನ

ಗದಗ: ನರಗುಂದ ಅಳಗವಾಡಿ ರಸ್ತೆಯಲ್ಲಿರುವ ಜಿಟಿಟಿಸಿ ಕೇಂದ್ರವು ಆಸಕ್ತ ಯುವಕರಿಂದ ಟೂಲ್‌ರೂಮ್ ಮಶಿನಿಸ್ಟ್, ವೆಹಿಕಲ್ ಅಸೆಂಬ್ಲಿ ಫಿಟ್ಟರ್‌ಮತ್ತು ಆಟೊಮೊಬೈಲ್ ವೆಲ್ಡರ್‌ವೃತ್ತಿ ತರಬೇತಿಗಳಿಗೆ ಎಸ್‌ಎಸ್ ಎಲ್‌ಸಿ ಅಥವಾ ಪಿಯುಸಿಯಲ್ಲಿ ಉತ್ತೀರ್ಣರಾದ ಮತ್ತು ಅನುತ್ತೀರ್ಣರಾದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ. ಒಂದು ವರ್ಷ ಅವಧಿಯ ಟೂಲ್ ರೂಮ್ ಮಶಿನಿಸ್ಟ್ ತರಬೇತಿಯಲ್ಲಿ ಟರ್ನರ್, ಮಿಲ್ಲರ್, ಗ್ರೇಂಡರ್, ಸಿಎನ್‌ಸಿ ಪ್ರಾಯೋಗಿಕ ತರಬೇತಿ ನೀಡಲಾಗುವುದು. ಅರ್ಜಿ ಸಲ್ಲಿಸಲು ಮೇ 15 ಕೊನೆಯ ದಿನವಾಗಿದೆ. ತರಬೇತಿಗಳು ಜೂ. 1ರಿಂದ ಪ್ರಾರಂಭವಾಗುತ್ತವೆ. ಹೆಚ್ಚಿನ ಮಾಹಿತಿಗಾಗಿ ಜಿಟಿಟಿಸಿ, ಅರ್ಬನ್‌ಗ್ರಾಮ, ಅಳಗವಾಡಿ ರಸ್ತೆ, ನರಗುಂದ ಮೊ. 8088536896 ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.



ಗದಗ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನ ಕಸಾಪ ಕಾರ್ಯಾಲಯದಲ್ಲಿ ಜಿಲ್ಲಾ ಕಸಾಪದಿಂದ ಶಿಕ್ಷಕ ದಂಪತಿಗಳಾದ ಅನ್ನಪೂರ್ಣದೇವಿ ಹಾಗೂ ಸಿದ್ಧಲಿಂಗಯ್ಯ ವಸ್ತ್ರದ ಅವರ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮ ನಡೆಯಿತು. ಶಿಕ್ಷಕ ಸಾಹಿತಿ ಡಾ. ಆರ್.ಎಲ್. ಹಂಸನೂರ ಮೊದಲಾದವರಿದ್ದರು.



ಲಕ್ಷ್ಮೇಶ್ವರದ ತಾಪಂ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆ ಕೊಡಮಾಡಿರುವ ಸುರಕ್ಷತಾ ಕಿಟ್‌ಗಳನ್ನು ಶಾಸಕ ಡಾ. ಚಂದ್ರು ಲಮಾಣಿ ಅವರು ಹಸ್ತಾಂತರಿಸಿದರು. ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಮಂಜುಳಾ ಹಕಾರಿ ಇತರರು ಇದ್ದರು.

ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

ಗದಗ: ಜಿಲ್ಲೆಯ ದೇವದಾಸಿ ಪುನರ್ವಸತಿ ಯೋಜನೆಯಡಿ ಜಿಲ್ಲಾ ಘಟಕದ ಕಚೇರಿಗಳಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಯೋಜನಾಧಿಕಾರಿಗಳ ಹುದ್ದೆಗೆ MSW/MA in sociology, MA, MSc.in Psychology ಹಾಗೂ ಕಡ್ಡಾಯವಾಗಿ ಕಂಪ್ಯೂಟರ್‌ಜ್ಞಾನವನ್ನು ಹೊಂದಿರಬೇಕು. ಯೋಜನಾ ಅನುಷ್ಠಾನಾಧಿಕಾರಿಗಳು ಹುದ್ದೆಗೆ BSW/ BA in sociology/ MA, MSc in Psycholigy ಹಾಗೂ ಕಡ್ಡಾಯವಾಗಿ ಕಂಪ್ಯೂಟರ್ ಜ್ಞಾನವನ್ನುಹೊಂದಿರಬೇಕು. ಆಸಕ್ತ ಅಭ್ಯರ್ಥಿಗಳು ತಮ್ಮ ವಿವರವಾದ ಮಾಹಿತಿ ಮತ್ತು ಮೂಲ ದಾಖಲೆಗಳ ನಕಲು ಪ್ರತಿಯೊಂದಿಗೆ ಮೇ 7ರಿಂದ ಮೇ 22ರ ಸಂಜೆ 5.30ರೊಳಗಾಗಿ ನಿಗದಿತ ನಮೂನೆಯಲ್ಲಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ, ದೂ. 83724-52099 ಅಥವಾ ದೇವದಾಸಿ ಪುನರ್ವಸತಿ ಯೋಜನೆ, ವಿಶ್ವೇಶ್ವರಯ್ಯನಗರ, ಶ್ರೀಸಾಯಿ ಯೋಗಾಶ್ರಮ ಹತ್ತಿರ ಗದಗ ದೂ. 8372-452099 ಈ ವಿಳಾಸಕ್ಕೆ ಅರ್ಜಿ ಸಲ್ಲಿಸಬಹುದು.

ಸಮಗ್ರ ತನಿಖೆಗೆ ಆಗ್ರಹ

ರೋಣ ತಾಲೂಕಿನ ಅಸೂಟಿ ಪಿಡಿಒ ಆತ್ಮಹತ್ಯೆ ಪ್ರಕರಣ

• **ಕನ್ನಡಪ್ರಭ ವಾರ್ತೆ** ಗದಗ

ರೋಣ ತಾಲೂಕಿನ ಅಸೂಟಿ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪಿಡಿಒ ಮುಕ್ತುಮ್ ಹುಸೇನ ಅವರ ಆತ್ಮಹತ್ಯೆ ಪ್ರಕರಣವನ್ನು ಸಮಗ್ರ ಹಾಗೂ ನಿಷ್ಪಕ್ಷಪಾತವಾಗಿ ತನಿಖೆ ನಡೆಸಬೇಕು ಎಂದು ಆಗ್ರಹಿಸಿ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಸಂಘದ ಸದಸ್ಯರು ಹಾಗೂ ಆರ್‌ಡಿಪಿಆರ್ ವೃಂದ ಸಂಘಗಳ ಪದಾಧಿಕಾರಿಗಳಿಂದ ಅಪರ ಜಿಲ್ಲಾಧಿಕಾರಿ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಸಂಘದ ಜಿಲ್ಲಾಧ್ಯಕ್ಷ ರಿಯಾಜ್ ಕೆ. ಮಾತನಾಡಿ, ಪಿಡಿಒಗಳ ಮೇಲೆ ದಿನದಿಂದ ದಿನಕ್ಕೆ ಕೆಲಸದ ಒತ್ತಡ ಹೆಚ್ಚುತ್ತಿದ್ದು, ಮೇಲಧಿಕಾರಿಗಳ ಅನಾವಶ್ಯಕ ಹಸ್ತಕ್ಷೇಪ ಹಾಗೂ ಆಡಳಿತಾತ್ಮಕ ಒತ್ತಡದಿಂದ ಅಧಿಕಾರಿಗಳು ಮಾನಸಿಕವಾಗಿ ಕುಗ್ಗುತ್ತಿದ್ದಾರೆ. ಇದೇ ರೀತಿಯ ಒತ್ತಡಗಳು ಮುಕ್ತುಮ್ ಹುಸೇನ ಅವರ ಆತ್ಮಹತ್ಯೆಗೆ ಕಾರಣವಾಗಿರಬಹುದು ಎಂಬ ಅನುಮಾನ, ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಸಂಪೂರ್ಣ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಘಟನೆಗೆ ಕಾರಣರಾದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಮೃತರ ಕುಟುಂಬಕ್ಕೆ ತಕ್ಷಣ ನ್ಯಾಯ ಒದಗಿಸಿ ಸಮರ್ಪಕ ಪರಿಹಾರಧನ ನೀಡಬೇಕು. ಜತೆಗೆ ಕುಟುಂಬದ ಒಬ್ಬರಿಗೆ ಸರ್ಕಾರಿ ಉದ್ಯೋಗ ನೀಡುವ ಮೂಲಕ ಆರ್ಥಿಕ ಭದ್ರತೆ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಪಿಡಿಒಗಳ ಮೇಲೆ ಇರುವ ಅತಿಯಾದ ಕೆಲಸದ ಒತ್ತಡವನ್ನು ಕಡಿಮೆ ಮಾಡುವ ಕ್ರಮಗಳನ್ನು ಸರ್ಕಾರ ಜಾರಿಗೆ ತರಬೇಕು. ಕೆಲಸದ ಸಮಯ, ಹೊಣೆಗಾರಿಕೆ ಹಾಗೂ ಆಡಳಿತಾತ್ಮಕ ನಿಯಮಗಳಿಗೆ ಸ್ಪಷ್ಟ ಮಾರ್ಗಸೂಚಿ ರೂಪಿಸಬೇಕು. ಜತೆಗೆ ಪಿಡಿಒಗಳಿಗೆ ಭದ್ರತೆ ಹಾಗೂ ಮಾನಸಿಕ ಬೆಂಬಲ ವ್ಯವಸ್ಥೆ ಕಲ್ಪಿಸಬೇಕು.



ಪಿಡಿಒ ಆತ್ಮಹತ್ಯೆ ಪ್ರಕರಣ ಸಮಗ್ರ ತನಿಖೆಗೆ ಆಗ್ರಹಿಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

- ಘಟನೆಗೆ ಕಾರಣರಾದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಮೃತರ ಕುಟುಂಬಕ್ಕೆ ತಕ್ಷಣ ನ್ಯಾಯ ಒದಗಿಸಿ ಸಮರ್ಪಕ ಪರಿಹಾರಧನ ನೀಡಬೇಕು
- ಪಿಡಿಒಗಳ ಮೇಲೆ ಇರುವ ಅತಿಯಾದ ಕೆಲಸದ ಒತ್ತಡವನ್ನು ಕಡಿಮೆ ಮಾಡುವ ಕ್ರಮಗಳನ್ನು ಸರ್ಕಾರ ಜಾರಿಗೆ ತರಬೇಕು
- ಮೇಲಧಿಕಾರಿಗಳ ಅನಾವಶ್ಯಕ ಹಸ್ತಕ್ಷೇಪ ನಿಯಂತ್ರಿಸಿ ಪಿಡಿಒಗಳಿಗೆ ಸೇವಾ ಸ್ವಾಯತ್ತತೆ ನೀಡುವ ಮೂಲಕ ಉತ್ತಮ ವಾತಾವರಣ ನಿರ್ಮಿಸಬೇಕು

ಮೇಲಧಿಕಾರಿಗಳ ಅನಾವಶ್ಯಕ ಹಸ್ತಕ್ಷೇಪ ನಿಯಂತ್ರಿಸಿ ಪಿಡಿಒಗಳಿಗೆ ಸೇವಾ ಸ್ವಾಯತ್ತತೆ ನೀಡುವ ಮೂಲಕ ಉತ್ತಮ ವಾತಾವರಣ ನಿರ್ಮಿಸಬೇಕು. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪಿಡಿಒಗಳ ಸೇವಾ ಪರಿಸ್ಥಿತಿಯನ್ನು ಸುಧಾರಿಸಲು ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ವೇಳೆ ವಿವಿಧ ತಾಲೂಕುಗಳಿಂದ ಆಗಮಿಸಿದ್ದ ಪಿಡಿಒಗಳು, ಕಾರ್ಯದರ್ಶಿಗಳು, ಡಾಟಾ ಎಂಟ್ರಿ ಆಪರೇಟರ್‌ಗಳು, ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಇದ್ದರು.

ಕಟ್ಟಡ ಕಾರ್ಮಿಕರ ಸುರಕ್ಷತಾ ಕಿಟ್ ಕಳಪೆ: ಶಾಸಕ ಆರೋಪ

ಕ್ರಮ ಕೈಗೊಳ್ಳಲು ಡಾ. ಚಂದ್ರು ಲಮಾಣಿ ಆಗ್ರಹ

• **ಕನ್ನಡಪ್ರಭ ವಾರ್ತೆ** ಲಕ್ಷ್ಮೇಶ್ವರ

ಕಟ್ಟಡ ಕಾರ್ಮಿಕರಿಗೆ ಗುಣಮಟ್ಟದ ಸುರಕ್ಷತಾ ಕಿಟ್ ವಿತರಣೆ ಬದಲು ಕಳಪೆ ಕಿಟ್ ವಿತರಿಸಿ ಗುತ್ತಿಗೆದಾರರು ಕೈತೊಳೆದುಕೊಂಡಿದ್ದಾರೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಆರೋಪಿಸಿದರು.

ಬುಧವಾರ ಪಟ್ಟಣದ ತಾಪಂ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆ ಕೊಡಮಾಡಿರುವ ಸುರಕ್ಷತಾ ಕಿಟ್ ವಿತರಿಸಿ ಮಾತನಾಡಿದರು.

ಸರ್ಕಾರ ಕಟ್ಟಡ ಹಾಗೂ ಇತರ ನಿರ್ಮಾಣ ಕಾರ್ಮಿಕರ ಸುರಕ್ಷತಾ ದೃಷ್ಟಿಯಿಂದ ಕಿಟ್ ವಿತರಣೆ ಮಾಡುತ್ತಿದೆ. ಆದರೆ ಲಕ್ಷ್ಮೇಶ್ವರ ತಾಲೂಕಿನಲ್ಲಿ ಕಿಟ್ ವಿತರಣೆ ಗುತ್ತಿಗೆ ಪಡೆದವರು ಕಳಪೆ ಗುಣಮಟ್ಟದ ವಸ್ತುಗಳನ್ನು ನೀಡಿದ್ದಾರೆ. ಕಾಟಾಚಾರಕ್ಕೆ ಸುರಕ್ಷತಾ ಕಿಟ್ ವಿತರಣೆ ಮಾಡಿದ್ದಾರೆ.

ಕಾರ್ಮಿಕರಿಗೆ ಕಳಪೆ ಗುಣಮಟ್ಟದ ಕಿಟ್‌ಗಳ ಈ ಕುರಿತು ಮಾಹಿತಿ ನೀಡಿದ್ದೇವೆ. ಸುರಕ್ಷತಾ ಕಟ್ ವಿತರಣೆಯ ಗುತ್ತಿಗೆ ಪಡೆದವರು ಕಳಪೆ ಗುಣಮಟ್ಟದ ವಸ್ತುಗಳನ್ನುನೀಡಿದ್ದಾರೆ. ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಹಾಗೂ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಬೇಕು ಎಂದು ಆಗ್ರಹಿಸಿದರು.

ಕಟ್ಟಡ ಹಾಗೂ ಇತರೆ ಕಾರ್ಮಿಕರ ಆರೋಗ್ಯ ತಪಾಸಣೆ ಹಾಗೂ ರಕ್ತ ತಪಾಸಣೆ ಮಾಡಿಸುವಂತೆ ವಿಧಾನಸಭೆಯ ಬಜೆಟ್ ಅಧಿವೇಶನದಲ್ಲಿ ಮಾತನಾಡಲಾಗಿತ್ತು. ಆದರೂ ಸರ್ಕಾರ ಆರೋಗ್ಯ ತಪಾಸಣೆ ಮಾಡಿಸದಿರುವುದು ದುರ್ದೈವ ಸಂಗತಿ. ಕಟ್ಟಡ ಕಾರ್ಮಿಕರ ಆರೋಗ್ಯ ತಪಾಸಣಾ ಶಿಬಿರವನ್ನು ಸರಿಯಾಗಿ ಆಯೋಜಿಸಿಲ್ಲ. ಕಟ್ಟಡ ಕಾರ್ಮಿಕರ ಹಾಗೂ ಅವರ ಮಕ್ಕಳ ಮದುವೆ ಪ್ರೋತ್ಸಾಹಧನ ನೀಡುವಲ್ಲಿ ತಾರತಮ್ಯ ನೀತಿ ಅನುಸರಿಸುತ್ತಿರುವುದು ಸರಿಯಾದ ಕ್ರಮವಲ್ಲ. ಶೀಘ್ರದಲ್ಲಿ ಕಾರ್ಮಿಕ ಇಲಾಖೆಯ ಅಧಿಕಾರಿಗಳು ಈ ಕುರಿತು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

- ಕಾರ್ಮಿಕ ಇಲಾಖೆಯ ಅಧಿಕಾರಿಗಳಿಗೆ ಗುಣಮಟ್ಟದ ಕಿಟ್ ನೀಡುವಂತೆ ತಿಳಿಸಿದ್ದರೂ ನಿರ್ಲಕ್ಷ್ಯ ಮಾಡುತ್ತಿರುವುದು ಸರಿಯಾದ ಕ್ರಮವಲ್ಲ: ಶಾಸಕ ಡಾ. ಚಂದ್ರು ಲಮಾಣಿ

ಈ ವೇಳೆ ತಾಲೂಕಿನ ಸುಮಾರು 362 ಜನ ಕಟ್ಟಡ ಹಾಗೂ ಇತರೆ ಕಾರ್ಮಿಕರಿಗೆ ಸುರಕ್ಷತಾ ಕಿಟ್ ವಿತರಿಸಲಾಯಿತು. ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಮಂಜುಳಾ ಹಕಾರಿ, ತಾಪಂ ಸಹಾಯಕ ಅಧಿಕಾರಿ ಕೃಷ್ಣಪ್ಪ ಧರ್ಮರ, ತಾಲೂಕಿನ ಕಾರ್ಮಿಕರ ಕಲ್ಯಾಣ ಇಲಾಖೆಯ ಅಧಿಕಾರಿ ಅಭಿನಂದನ್ ಇದ್ದರು. ಕಟ್ಟಡ ಕಾರ್ಮಿಕರ ಸಂಘದ ಮೌನೇಶ ಬಾಲೆಹೊಸೂರ, ಚಾವಡಿ ಸೇರಿದಂತೆ ಅನೇಕರು ಇದ್ದರು.

ಕನ್ನಡ ಕರುಳಿನ ಭಾಷೆಯಾದರೆ ಉಳಿವು

112ನೇ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಉಪನ್ಯಾಸ ಕಾರ್ಯಕ್ರಮ

• **ಕನ್ನಡಪ್ರಭ ವಾರ್ತೆ** ಶಿರಹಟ್ಟಿ

ಸರ್ಕಾರದ ವಿವಿಧ ಎಲ್ಲ ಇಲಾಖೆಗಳಲ್ಲಿ ಅಧಿಕಾರಿಗಳು ಕನ್ನಡ ಹೆಚ್ಚಾಗಿ ಬಳಸಬೇಕು. ಅದನ್ನು ಕರುಳಿನ ಭಾಷೆಯಾಗಿ ಭಾವಿಸಿದರೆ ಮಾತ್ರ ಕನ್ನಡ ಉಳಿಯಲು ಸಾಧ್ಯ ಎಂದು ಪ್ರೊ. ಬಸವರಾಜ ಕುಂದೂರ ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ಶಿರಹಟ್ಟಿ ತಾಲೂಕು ಘಟಕ ಹಾಗೂ ಬೆಳ್ಳಟ್ಟಿ ಕದಂಬ ಕಲಿಕಾ ಶಿಬಿರದ ಸಹಯೋಗದೊಂದಿಗೆ ನಡೆದ 112ನೇ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಅವರು ಉಪನ್ಯಾಸ ನೀಡಿದರು. ಭಾರತದ ಅತ್ಯಂತ ಪ್ರಭಾವಶಾಲಿ ಭಾಷೆಗಳಲ್ಲಿ ಕನ್ನಡ ಒಂದು ಪ್ರಚಂಡ ಭಾಷೆಯಾಗಿದೆ. ನಮ್ಮ ಪರಂಪರೆ ಕಲಿಯಲು ಮಾತೃಭಾಷೆ ಅಸ್ಮಿತೆ ಉಳಿಸಲು ನಾವು ಅದನ್ನು ಉಳಿಸಿಕೊಂಡು ಹೋಗಬೇಕಿದೆ. ಇಲ್ಲವಾದರೆ ನಮ್ಮನ್ನು ನಾವೇ ಆತ್ಮಹತ್ಯೆ ಮಾಡಿಕೊಂಡಂತೆ ಆಗುತ್ತದೆ ಎಂದು ಹೇಳಿದರು.

ಕನ್ನಡ ಮಾತೃಭಾಷೆ. ಅದಕ್ಕಾಗಿ ಸಾಹಿತ್ಯ ಪರಿಷತ್ತು ಹಗಲಿರುಳು ಶ್ರಮಿಸುತ್ತಿದೆ. ಕನ್ನಡ ಭಾಷೆ, ಸಾಹಿತ್ಯ, ಕಲೆ, ಜನಪದ ಸಂಸ್ಕೃತಿಗಳ ಸಂವರ್ಧನೆಗೆ ಹಾಗೂ ಸಂರಕ್ಷಣೆಯ ಮಹದಾಸೆಯೊಂದಿಗೆ ಸ್ಥಾಪನೆಯಾದ ಕನ್ನಡಿಗರ ಸಾಂಸ್ಕೃತಿಕ ಮೇರು ಸಂಸ್ಥೆಯೇ ಕನ್ನಡ ಸಾಹಿತ್ಯ ಪರಿಷತ್ತು. ಕನ್ನಡ ನಾಡಿನ ನಾಡು, ನುಡಿ ಮತ್ತು ಜನರ ಹಿತಾಸಕ್ತಿಗಳನ್ನು ಸಂರಕ್ಷಿಸುವ ಹೊಣೆಗಾರಿಕೆ ಮತ್ತು ವಿಶೇಷ ಜವಾಬ್ದಾರಿ ಈ ಕನ್ನಡ ಸಾಹಿತ್ಯ ಪರಿಷತ್ತಿಗೆ ಇದೆ ಎಂದರು.

ಜಿಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜಶೆಟ್ಟರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕನ್ನಡವನ್ನು ಬೃಹತ್ ಹೆಮ್ಮರವಾಗಿ ಬೆಳೆಸಬೇಕು. ಭಾಷೆ ಸದೃಢವಾಗಿದ್ದರೆ ಆ ರಾಜ್ಯ ಶಕ್ತಿಶಾಲಿಯಾಗಿರುತ್ತದೆ. ಭಾರತದಲ್ಲಿ ಅತ್ಯಂತ ಪುರಾತನವಾದ ಭಾಷೆ ಕನ್ನಡ.



ಜಿಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ ಕಾರ್ಯಕ್ರಮ ಉದ್ಘಾಟನೆ ಮಾಡಿದರು.

ಕನ್ನಡ ಭಾಷೆಗೆ ತನ್ನದೇ ಆದ ಅಂತರ್ಗತ ಶಕ್ತಿ ಇದೆ. ಎಲ್ಲ ರಂಗಗಳಲ್ಲಿಯೂ ಕನ್ನಡಕ್ಕೆ ಸ್ಥಾನ ನೀಡಬೇಕು ಎಂದರು.

ಬಿ.ಎಂ. ಯರಕದ ಮಾತನಾಡಿ, ಸರ್ಕಾರ ಭಾಷಾ ವಿಷಯದಲ್ಲಿ ದ್ವಿಮುಖ ನೀತಿ ಅನುಸರಿಸುತ್ತಿದೆ. ಕನ್ನಡ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ಶಾಲೆಗಳನ್ನು ತೆರೆದು ಕನ್ನಡಕ್ಕೆ ಸಂಕಷ್ಟ ತಂದೊಡ್ಡುತ್ತಿದೆ.

ಭಾಷೆ ಕೇವಲ ಸಂವಹನದ ಸಾಧನವಲ್ಲ. ಅದು ಸಂಸ್ಕೃತಿ, ಗುರುತು ಮತ್ತು ಸ್ವಾಭಿಮಾನಕ್ಕೆ ಸಂಬಂಧಿಸಿದೆ. ಆದ್ದರಿಂದ ನೀತಿಗಳು ಸ್ಪಷ್ಟವಾಗಿಯೂ, ಅನುಷ್ಠಾನ ಸಮಗ್ರವಾಗಿಯೂ ಇರಬೇಕು ಎಂದರು.

ಕಸಾಪ ಅಧ್ಯಕ್ಷ ನವೀನಕುಮಾರ ಅಳವಂಡಿ ಅಧ್ಯಕ್ಷತೆ ವಹಿಸಿದ್ದರು. ಈಶಪ್ಪ ಅಕ್ಕೂರ, ಎಚ್.ಟಿ. ಬಿಜ್ಜೂರು, ವಿ.ಜಿ. ಅಂಗಡಿ, ಜಯಶ್ರೀ ಬಸವರೆಡ್ಡಿ, ಶಿವಯೋಗಿ ವಿಭೂತಿ, ಸುರೇಶ ಬಸವರೆಡ್ಡಿ, ರಮೇಶ್ ಮಲ್ಲಾಡದ, ದೇವೇಂದ್ರ ಅಂಬಣ್ಣವರ್, ವಿನಾಯಕ ಅಳವಂಡಿ, ಡಾ. ಪ್ರಭುಗೌಡರ, ರವಿ ಪಾಟೀಲ, ಎಸ್.ಯು. ಬಟ್ಟೂರ, ವೆಂಕಟೇಶ್ ಬಸವರೆಡ್ಡಿ, ಕೊಟ್ರಯ್ಯ ಹೊಂಬಾಳ್ಮಠ, ಸತೀಶ ವಾರದ ಉಪಸ್ಥಿತರಿದ್ದರು.

ಅಶೋಕ ಬಡಿಗೇರ ಅವರ ಕಲಾ ತಂಡದಿಂದ ಕನ್ನಡ ನಾಡು-ನುಡಿಕುರಿತಾದಹಾಡುಗಳನ್ನುಹಾಡಲಾಯಿತು. ರಣತೂರು ಗ್ರಾಮದ ಶಿವಕುಮಾರ ಫಕೀರಪ್ಪ ಪಲ್ಲೇದ ನೂತನ ಪಿಎಸ್‌ಐ ಆಗಿ ಆಯ್ಕೆಯಾದ ನಿಮಿತ್ತ ಅವರನ್ನು ಕದಂಬ ಕಲಿಕಾ ಶಿಬಿರದ ವತಿಯಿಂದ ಸನ್ಮಾನಿಸಲಾಯಿತು. ಅಶೋಕ ಬಡಿಗೇರ ವಿವಿಧ ಪ್ರಶಸ್ತಿಗಳಿಗೆ ಭಾಜನರಾದ ನಿಮಿತ್ತ ಕಸಾಪ ವತಿಯಿಂದ ಸನ್ಮಾನಿಸಲಾಯಿತು.

17ರಂದು ಪ್ರತಿಭಾ ಪುರಸ್ಕಾರ

• **ಕನ್ನಡಪ್ರಭ ವಾರ್ತೆ** ಮುಂಡರಗಿ

ತಾಲೂಕು ಹಾಲುಮತ ಮಹಾಸಭಾ ಮತ್ತು ತಾಲೂಕು ಕುರುಬರ ಸಂಘದ ವತಿಯಿಂದ ತಾಲೂಕಿನ ಸುಮಾರು 40 ಪ್ರೌಢಶಾಲೆ ಹಾಗೂ 9 ಪದವಿಪೂರ್ವ ಕಾಲೇಜುಗಳಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಮೇ 17ರಂದು ಹೆಸರೂರು ರಸ್ತೆಯ ಇಟಗಿ ಭೀಮಾಂಬಿಕಾದೇವಸ್ಥಾನದಲ್ಲಿ ಜರುಗಲಿದೆ ಎಂದು ತಾಲೂಕು ಹಾಲುಮತ ಮಹಾಸಭಾ ಅಧ್ಯಕ್ಷ ಸುರೇಶ ಹಲವಾಗಲಿ ಹೇಳಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಕೇವಲ ಹಾಲುಮತ ಸಮುದಾಯ ಮಕ್ಕಳಿಗೆ ಮಾತ್ರ ಪ್ರತಿಭಾ ಪುರಸ್ಕಾರ ಮಾಡಲಾಗುತ್ತಿತ್ತು. ಕಳೆದ ಎರಡು ವರ್ಷಗಳಿಂದ ಮಕ್ಕಳಲ್ಲಿ ಭೇದ-ಭಾವ ಮೂಡಿಸಬಾರದೆನ್ನುವ ಉದ್ದೇಶದಿಂದ ಎಲ್ಲ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ, ಶಾಲೆಗೆ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತದೆ ಎಂದರು.

ಗೌರವಾಧ್ಯಕ್ಷ ಶಿವನಗೌಡ ಗೌಡ್ರ ಮಾತನಾಡಿ, ಮೇ 17ರಂದು ಜರುಗುವ ಕಾರ್ಯಕ್ರಮಕ್ಕೆ ಅತಿಥಿಗಳಾಗಿ ವಿಶ್ರಾಂತ ಆರ್‌ಟಿಒ ಬಸವಣ್ಣೆಪ್ಪ ಹರ್ತಿ, ಕಪ್ಪತ್ ಹಿಲ್ಸ್ ವಲಯ ಅರಣ್ಯಾಧಿಕಾರಿ ಮಂಜುನಾಥ ಮೇಗಲಮನಿ, ರುದ್ರಣ್ಣ ಗುಳಗುಳಿ, ರಾಜು ಮೋರೆ, ಡಾ. ಗೋಣೇಶ ಮೇವುಂಡಿ ಹಾಗೂ ದೇವಸ್ಥಾನದ ಧರ್ಮದರ್ಶಿ ಅಭಿವನ್ಯಪ್ಪ ಪಾಲ್ಗೊಳ್ಳಲಿದ್ದಾರೆ. ಎಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ ಶ್ರೀನಿವಾಸ ಅಬ್ಬಿಗೇರಿ, ಡಾ. ಗೋಣೇಶ ಮೇವುಂಡಿ, ಜಗದೀಶ ಸಂಗಟಿ, ಪರಶುರಾಮ ತಿಗರಿ, ರಾಘವೇಂದ್ರ ದಂಡಿನ ಉಪಸ್ಥಿತರಿದ್ದರು.

ಮಮತಾ ಬ್ಯಾನರ್ಜಿ ನಿಲುವು ಮೂರ್ಖತನದ ಪರಮಾವಧಿ

ಕೇಂದ್ರ ಸರ್ಕಾರದ ಜತೆ ಟಿಎಂಸಿ ಸಂಘರ್ಷ ಸರಿಯಲ್ಲ: ಶೆಟ್ಟರ್

• **ಕನ್ನಡಪ್ರಭ ವಾರ್ತೆ** ಗದಗ



ಪಶ್ಚಿಮ ಬಂಗಾಳದಲ್ಲಿ ಬಿಜೆಪಿ 207 ಸ್ಥಾನಗಳಲ್ಲಿ ಗೆದ್ದಿದ್ದು, ಆದರೂ ಅಲ್ಲಿನ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ತಮ್ಮ ಹುದ್ದೆಗೆ ರಾಜೀನಾಮೆ ನೀಡದೇ ಮೊಂಡುತನ ಮಾಡುತ್ತಿರುವುದು ಮೂರ್ಖತನದ ಪರಮಾವಧಿ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಜಗದೀಶ ಶೆಟ್ಟರ್ ಟೀಕಿಸಿದರು.

ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿ, ಕಳೆದ 15 ವರ್ಷಗಳಿಂದ ಪಶ್ಚಿಮ ಬಂಗಾಳದಲ್ಲಿ ಆಡಳಿತ ನಡೆಸಿದ ಮಮತಾ ಬ್ಯಾನರ್ಜಿ ಅವರ ಆಡಳಿತಕ್ಕೆ ಬೇಸತ್ತ ಜನ ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿ ಕಾರ್ಯಗಳಿಂದ ಬಿಜೆಪಿಗೆ ಬಹುಮತ ನೀಡಿದ್ದಾರೆ. ಟಿಎಂಸಿಯ ಗೂಂಡಾಗಿರಿ ಸತತವಾಗಿ ಕೇಂದ್ರ ಸರ್ಕಾರದೊಂದಿಗೆ ಸಂಘರ್ಷ, ಕೇಂದ್ರ ಸರ್ಕಾರದ ಯೋಜನೆಗಳನ್ನು ಜಾರಿಗೆ ತರದೇ ಜನರಿಗೆ ಮೋಸ ಮಾಡಿದ್ದನ್ನು ಅರಿತ ಅಲ್ಲಿಯ ಜನ ಟಿಎಂಸಿಗೆ ತಕ್ಕ ಪಾಠ ಕಲಿಸಿದ್ದಾರೆ ಎಂದರು.

100 ಕ್ಷೇತ್ರಗಳಲ್ಲಿ ಮತಚೋರಿ ಆಗಿದೆ ಎಂದು ಮಮತಾ ಬ್ಯಾನರ್ಜಿ ಅವರು ಆರೋಪಿಸಿದ್ದಾರೆ. ಇದನ್ನು ಬೆಂಬಲಿಸಿದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರ ನಿಲುವು ದಿವಾಳಿತನದ ಪರಮಾವಧಿಯಾಗಿದೆ. ಒಂದು ರಾಜ್ಯದ ಜನ ಸರ್ಕಾರ ಬದಲಿಸಿದಾಗ ಅದರಂತೆ ನಡೆದುಕೊಳ್ಳುವುದು ಪ್ರತಿಯೊಬ್ಬ ಚುನಾಯಿತ ಸರ್ಕಾರದ ಜವಾಬ್ದಾರಿ. ಅದನ್ನು ಬಿಟ್ಟು ಬೇಜಾವಾಬ್ದಾರಿಯಿಂದ ಹೇಳಿಕೆ ನೀಡುವ ಮಮತಾ ಬ್ಯಾನರ್ಜಿ ಹಾಗೂ ರಾಹುಲ್ ಗಾಂಧಿಯವರ ನಡೆಯನ್ನು ತೀವ್ರವಾಗಿ ಖಂಡಿಸಿದರು.

ಮೇ 9ರಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ರಾಜಕೀಯ ಪ್ರವೇಶಿಸಿ 50 ವರ್ಷ ಕಳೆದ ಸಂಭ್ರಮಚಾರಣೆಯನ್ನು ಚಿತ್ರದುರ್ಗ ನಗರದಲ್ಲಿ ಅಭಿಮಾನೋತ್ಸವ ಹಮ್ಮಿಕೊಂಡಿದ್ದು, ಕಾರ್ಯಕ್ರಮದಲ್ಲಿ ಜಿಲ್ಲೆಯಿಂದ ಹೆಚ್ಚಿನ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಮನವಿ ಮಾಡಿದರು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ, ಮಾಜಿ ಪ್ರಾಧಿಕಾರದ ಅಧ್ಯಕ್ಷ ಸಂಗಮೇಶ ದುಂದೂರ, ಹಿರಿಯರಾದ ತೊಟೊಸಾ ಭಾಂಡಗೆ, ಶಹರ ಅಧ್ಯಕ್ಷ ಸುರೇಶ ಮರಳಪ್ಪನವರ, ಕೆ.ಪಿ. ಕೋಟಿಗೌಡ್ರ, ರಮೇಶ ಸಜ್ಜಗಾರ, ಮಂಜುನಾಥ ಶಾಂತಗೇರಿ, ರವಿ ಮಾನ್ವಿ ಇದ್ದರು.

ಅಭಿಮತ... ಕಸಾಪ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ರವಿ ದೇವರಡ್ಡಿ

ಸಾಹಿತ್ಯದಿಂದ ಚಿಂತನಶೀಲ ಮನಸ್ಸು ಕಟ್ಟಲು ಸಾಧ್ಯ

• **ಕನ್ನಡಪ್ರಭ ವಾರ್ತೆ** ಮುಂಡರಗಿ

ನಾಲ್ವಡಿ ಕೃಷ್ಣರಾಜ ಒಡೆಯರ್‌ಕನ್ನಡ ನಾಡು, ನುಡಿಗಾಗಿ ವ್ಯವಸ್ಥಿತ ಕಾರ್ಯ ಆರಂಭಿಸಬೇಕೆನ್ನುವ ಯೋಚನೆಯನ್ನು ಹಿರಿಯರೊಂದಿಗೆ ಚರ್ಚಿಸಿದಾಗ ಹುಟ್ಟಿದ ಸಂಸ್ಥೆಯೇ ಕನ್ನಡ ಸಾಹಿತ್ಯ ಪರಿಷತ್. ಸಾಹಿತ್ಯದ ಮೂಲಕ ಚಿಂತನಶೀಲ ಮನಸ್ಸುಗಳನ್ನು ಕಟ್ಟಲು ಸಾಧ್ಯವೆಂದು ಯೋಚಿಸಿದ್ದರು ಎಂದು ಶಿಕ್ಷಕ ರವಿ ದೇವರಡ್ಡಿ ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ತು ತಾಲೂಕ ಘಟಕ ಹಾಗೂ ಕ.ರಾ. ಬೆಲ್ಲದ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಆಶ್ರಯದಲ್ಲಿ ಕಾಲೇಜಿನ ಸಭಾಭವನದಲ್ಲಿ ಬುಧವಾರ ಆಯೋಜಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ, ಪ್ರತಿಭಾ ಪುರಸ್ಕಾರ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ನಡೆದು ಬಂದ ದಾರಿ ಕುರಿತು ಮಾತನಾಡಿದರು.



ಕಾರ್ಯಕ್ರಮವನ್ನು ಜ.ಅ. ವಿದ್ಯಾ ಸಮಿತಿ ಆಡಳಿತಾಧಿಕಾರಿ ಡಾ. ಬಿ.ಜಿ. ಜವಳಿ ಉದ್ಘಾಟಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಈ ನೆಲದ ಜನರ ವಿಶ್ವವಿದ್ಯಾಲಯವಾಗಬೇಕು. ನಾಡಿನ ಅಭಿವೃದ್ಧಿಗೆ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಪೂರಕವಾಗಿ ಕೆಲಸ ಮಾಡಬೇಕು ಎಂಬ ಆಶಯವನ್ನು ರಾಜರು ಹೊಂದಿದ್ದರು ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಜ.ಅ. ವಿದ್ಯಾ ಸಮಿತಿ ಆಡಳಿತಾಧಿಕಾರಿ ಡಾ. ಬಿ.ಜಿ. ಜವಳಿ ಮಾತನಾಡಿ, ಕನ್ನಡ ನಾಡಿಗೆ ತನ್ನದೆ ಆದ ಇತಿಹಾಸವಿದೆ. 1915ರ ಮೇ 5ರಂದು ನಾಲ್ವಡಿ ಕೃಷ್ಣರಾಜ ಒಡೆಯರ್, ಸರ್‌ಎಂ. ವಿಶ್ವೇಶ್ವರಯ್ಯ ಅವರ ಆಳ್ವಿಕೆಯ ಕಾಲದಲ್ಲಿ ಕನ್ನಡ ಭಾಷೆಮತ್ತು ಸಾಹಿತ್ಯದ ಅಭಿವೃದ್ಧಿಗಾಗಿ ಕನ್ನಡ ಸಾಹಿತ್ಯ ಪರಿಷತ್ತನ್ನು ಹುಟ್ಟುಹಾಕಲಾಯಿತು ಎಂದರು.

- 1915ರ ಮೇ 5ರಂದು ನಾಲ್ವಡಿ ಕೃಷ್ಣರಾಜ ಒಡೆಯರ್, ಸರ್‌ಎಂ. ವಿಶ್ವೇಶ್ವರಯ್ಯ ಅವರ ಆಳ್ವಿಕೆಯ ಕಾಲದಲ್ಲಿ ಕನ್ನಡ ಮತ್ತು ಸಾಹಿತ್ಯದ ಅಭಿವೃದ್ಧಿಗಾಗಿ ಕನ್ನಡ ಸಾಹಿತ್ಯ ಪರಿಷತ್ತನ್ನು ಹುಟ್ಟುಹಾಕಲಾಯಿತು

ಕಸಾಪ ಕಾರ್ಯಕಾರಿ ಮಂಡಳಿ ಸದಸ್ಯ ಕಾಶೀನಾಥ ಬಿಳಿಮಗ್ಗದ ಕನ್ನಡ ಭಾಷೆಯ ಶ್ರೇಷ್ಠತೆ ಮಹತ್ವದ ಕುರಿತು, ಅತಿಥಿಯಾಗಿ ಪಾಲ್ಗೊಂಡಿದ್ದ ಬಿಇಒ ಗಂಗಾದರ ಅಣ್ಣಿಗೇರಿ ಮಾತನಾಡಿದರು.

ತಾಲೂಕು ಕಸಾಪ ಅಧ್ಯಕ್ಷ ಪ್ರೊ. ಎಂ.ಜಿ. ಗಚ್ಚಣ್ಣವರ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ ಮಾಧ್ಯಮದಲ್ಲಿ ಕನ್ನಡ ಭಾಷೆಯಲ್ಲಿ 125ಕ್ಕೆ 125 ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ತಾಲೂಕು ಕಸಾಪ ಘಟಕದಿಂದ ಸನ್ಮಾನಿಸಲಾಯಿತು. ಮುಂಡರಗಿ ನಾಟ್ಯಬಿಂದು ಅಕಾಡೆಮಿಯ ಮಕ್ಕಳಿಂದ ನೃತ್ಯ ಜರುಗಿತು.

ಈ ಸಂದರ್ಭದಲ್ಲಿ ಡಾ. ಸಂತೋಷ ಹಿರೇಮಠ, ಡಾ. ನಿಂಗು ಸೊಲಗಿ, ಮಂಜುನಾಥ ಮುಧೋಳ, ಎನ್.ಎನ್. ಕಲಕೇರಿ, ಸುರೇಶ ಬಾವಿಹಳ್ಳಿ, ಕೃಷ್ಣಮೂರ್ತಿ ಸಾಹುಕಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಶಂಕರ ಕೂಕನೂರ ಸ್ವಾಗತಿಸಿದರು. ಜೆ. ಕುಮಾರ ನಿರೂಪಿಸಿ, ವಂದಿಸಿದರು.

> ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮ ರಾಜ್ಯ ಹಾಗೂ ರಾಷ್ಟ್ರದ ಗಮನ ಸೆಳೆದಿದ್ದು, ಅವರು ಈ ಹಿಂದೆ ಗದಗ ನಗರಕ್ಕೆ ಆಗಮಿಸಿದಾಗ ಅವರು ಸೈಕಲ್ ಮುಖಾಂತರ ಪ್ರವಾಸ ಮಾಡಿ ಸಾಕಷ್ಟು ಗಮನ ಸೆಳೆದಿದ್ದರು.
>
> • **ಸುಧೀರ್ ಕಾಟಿಗರ್** ಬಿಜೆಪಿ ಒಬಿಸಿ ಮೋರ್ಚಾ ರಾಜ್ಯ ಕಾರ್ಯದರ್ಶಿ

ಸುದ್ದಿ ಸಿಂಚನ

ಇಂದಿನಿಂದ ಕನ್ನಡ ಕವಿತೆಗಳ ವಾಚನ

ಮುಂಡರಗಿ: ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಘಟಕ, ಶರಣ ಎಚ್.ಎಸ್. ಪಾಟೀಲ ಪ್ರತಿಷ್ಠಾನ, ರಾಮೇನಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆಶ್ರಯದಲ್ಲಿ ಪುರಸಭೆ ವ್ಯಾಪ್ತಿಯ ರಾಮೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮೇ 7 ಹಾಗೂ 8ರಂದು ಕನ್ನಡ ಕವಿತೆಗಳ ವಾಚನ- ಗೀತ ಗಾಯನ ಮಕ್ಕಳ ಶಿಬಿರ ಬೆಳಗ್ಗೆ 10.30ರಿಂದ ಮಧ್ಯಾಹ್ನ 1.30ರ ವರೆಗೆ ಜರುಗಲಿದೆ.

- ರಾಮೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಾರ್ಯಕ್ರಮ

ಮೇ 7ರಂದು ಬೆಳಗ್ಗೆ 10.30ಕ್ಕೆ ಶಿಬಿರದ ಉದ್ಘಾಟನೆ ಜರುಗಲಿದೆ. ಎಸ್‌ಡಿಎಂಸಿ ಅಧ್ಯಕ್ಷ ಉಮೇಶ ದಂಡಿನ ಅಧ್ಯಕ್ಷತೆ ವಹಿಸುವರು. ಶರಣ ಎಚ್.ಎಸ್. ಪಾಟೀಲ ಪ್ರತಿಷ್ಠಾನದ ಮುಖ್ಯಸ್ಥರು ಹಾಗೂ ಶಿಕ್ಷಣಪ್ರೇಮಿ ಆನಂದಗೌಡ ಪಾಟೀಲ ಶಿಬಿರದ ಉದ್ಘಾಟನೆ ನೆರವೇರಿಸಲಿದ್ದಾರೆ. ಅತಿಥಿಗಳಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ಗಂಗಾಧರ ಅಣ್ಣಿಗೇರಿ, ಶಿಕ್ಷಣ ಪ್ರೇಮಿಗಳಾದ ಬಸವರಾಜ ತಿಗರಿ, ಸಹದೇವಪ್ಪ ಡಂಬಳ, ಪ್ರೊ. ಎಂ.ಜಿ. ಗಚ್ಚಣ್ಣವರ, ಶಿಬಿರದ ನಿರ್ದೇಶಕ ಡಾ. ನಿಂಗು ಸೊಲಗಿ ಸೇರಿದಂತೆ ಅನೇಕರು ಪಾಲ್ಗೊಳ್ಳಲಿದ್ದಾರೆ.

ರೋಣದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಪ್ರವೇಶ ಪ್ರಾರಂಭ

ರೋಣ: ಪಟ್ಟಣದ ಮುದೇನಗುಡಿ ರಸ್ತೆಯ ಪಕ್ಕದಲ್ಲಿ ಪ್ರಾರಂಭವಾಗಿರುವ ನೂತನ ಪಾಲಿಟೆಕ್ನಿಕ್ ಕಾಲೇಜಿನ 2026- 27ನೇ ಸಾಲಿನ ಪ್ರವೇಶಾತಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಡಿಪ್ಲೊಮಾ ಕೋರ್ಸ್‌ಗಳಿಗೆ ಪ್ರವೇಶಾತಿ ಪಡೆಯಲು ಇಚ್ಚಿಸುವ ಎಸ್‌ಎಸ್‌ಎಲ್‌ಸಿ ಪಾಸಾದ ವಿದ್ಯಾರ್ಥಿಗಳು ಪ್ರವೇಶಾತಿಗಾಗಿ ಅರ್ಜಿ ಸಲ್ಲಿಸಬಹುದು.

- ಕಡಿಮೆ ವೆಚ್ಚದಲ್ಲಿ ತಾಂತ್ರಿಕ ಶಿಕ್ಷಣ ಪಡೆಯಲು ಅವಕಾಶ

ಆರ್ಟಿಫಿಶಿಯಲ್ ಇಂಟೆಲಿಜೆನ್ಸ್, ಕಂಪ್ಯೂಟರ್‌ಸೈನ್ಸ್ ಆಂಡ್ ಎಂಜಿನಿಯರಿಂಗ್, ಎಲೆಕ್ಟ್ರಾನಿಕ್ ಆ್ಯಂಡ್ ಕಮ್ಯುನಿಕೇಶನ್, ಮೆಕ್ಯಾನಿಕಲ್ ಎಂಜಿನಿಯರಿಂಗ್ ಕೋರ್ಸ್‌ಗಳು ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಲಭ್ಯವಿವೆ. ₹8 ಕೋಟಿ ವೆಚ್ಚದಲ್ಲಿ ನಿರ್ಮಿಸಲಾದ ಸುಸಜ್ಜಿತ ಕಟ್ಟಡ, ಸ್ಮಾರ್ಟ್ ಕ್ಲಾಸ್, ಅತ್ಯುತ್ತಮ ಪ್ರಯೋಗಾಲಯ, ನುರಿತ ಮತ್ತು ಅನುಭವಿ ಉಪನ್ಯಾಸ ಬಳಗ, ಸುಸಜ್ಜಿತ ಗ್ರಂಥಾಲಯ ಹೊಂದಿದ್ದು, ಕಡಿಮೆ ವೆಚ್ಚದಲ್ಲಿ ತಾಂತ್ರಿಕ ಶಿಕ್ಷಣ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಕಾಲೇಜಿನ ಪ್ರಾಚಾರ್ಯರಾದ ಮಹಾಂತೇಶ ಗುಡ್ಡಿನ ಅವರ ಮೊ. 8310918709 ಸಂಪರ್ಕಿಸಬಹುದು ಎಂದು ಕಾಲೇಜಿನ ಪ್ರಕಟಣೆ ತಿಳಿಸಿದೆ.



ದಾವಣಗೆರೆ ಮತ್ತು ಬಾಗಲಕೋಟೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಜಯಗಳಿಸಿದ ಹಿನ್ನೆಲೆ ಗದುಗಿನ ಹುಯಿಲಗೋಳ ನಾರಾಯಣರಾಯರ ವೃತ್ತದಲ್ಲಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ವಿಜಯೋತ್ಸವ ಆಚರಿಸಲಾಯಿತು.



ನರಗುಂದ ತಾಲೂಕಿನ ಬೆನಕನಕೊಪ್ಪ ಗ್ರಾಮದ ದ್ಯಾಮಮ್ಮ ದುರ್ಗಾದೇವಿ ಜಾತ್ರೆಯಲ್ಲಿ ಗ್ರಾಮದ ಮಹಿಳೆಯರು ಸಂಭ್ರಮದಿಂದ ಪಾಲ್ಗೊಂಡಿದ್ದರು. ಈ ವೇಳೆ ಸಾವಿರಾರು ಭಕ್ತರು ದೇವಿಗೆ ಭಕ್ತಿ ಸಮರ್ಪಿಸಿದರು



ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಅಭಿಮಾನೋತ್ಸವ ಹಿನ್ನೆಲೆಯಲ್ಲಿ ಗದಗ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಹಮ್ಮಿಕೊಂಡಿರುವ ಪೂರ್ವಭಾವಿ ಸಭೆಯಲ್ಲಿ ಶಾಸಕ ಸಿ.ಸಿ. ಪಾಟೀಲ ಮಾತನಾಡಿದರು. ಪಕ್ಷದ ಪ್ರಮುಖರು ಇದ್ದರು.

ದಕ್ಷಿಣ ಭಾರತದಲ್ಲಿ ಬಿಜೆಪಿಗೆ ಬಿಎಸ್‌ವೈ ಬುನಾದಿ

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅಭಿಮಾನೋತ್ಸವ ಪ್ರಯುಕ್ತ ಗದಗದಿಂದ ಚಿತ್ರದುರ್ಗಕ್ಕೆ ಸೈಕಲ್ ಯಾತ್ರೆ

• **ಕನ್ನಡಪ್ರಭ ವಾರ್ತೆ** ಗದಗ

ಮೇ 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಬಿ.ಎಸ್. ಯಡಿಯೂರಪ್ಪ ಅಭಿಮಾನೋತ್ಸವಕ್ಕೆ ಗದಗದಿಂದ ಚಿತ್ರದುರ್ಗಕ್ಕೆ ಸೈಕಲ್ ಮೂಲಕ ಬಿ.ವೈ. ವಿಜಯೇಂದ್ರ ಹಾಗೂ ಸುಧೀರ್ ಕಾಟಿಗರ್ ಅವರ ಅಭಿಮಾನಿ ಪ್ರಭು ಡಿಗ್ಗಾವಿ ಹೊರಟಿದ್ದು, ನಗರದ ವೀರೇಶ್ವರ ಪುಣ್ಯಾಶ್ರಮದ ಪುಟ್ಟರಾಜ ಗವಾಯಿಗಳ ಮಠದಲ್ಲಿ ಪೂಜೆ ಸಲ್ಲಿಸಿ ಕಲ್ಲಯ್ಯಜ್ಜನವರು ಚಾಲನೆ ನೀಡಿದರು.


ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಯಡಿಯೂರಪ್ಪನವರ ಸೇವೆ ರಾಜ್ಯಕ್ಕೆ ಮರೆಯಲಾಗದ ಕೊಡುಗೆ ಹಿಂದೆ ಅವರು ರಾಜ್ಯಾದ್ಯಂತ ಸೈಕಲ್ ಮುಖಾಂತರ ಪ್ರವಾಸ ಮಾಡಿ ಪಕ್ಷ ಗಟ್ಟಿಗೊಳಿಸಿ, ದಕ್ಷಿಣ ಭಾರತದಲ್ಲಿ ಪಕ್ಷ ಬೆಳೆಯಲು ಕಾರಣೀಕರ್ತರು. ಗದುಗಿನ ಯುವಕ ಪ್ರಭು ಡಿಗ್ಗಾವಿ ಅವರು ಚಿತ್ರದುರ್ಗದಲ್ಲಿನಡೆಯುವ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಸೈಕಲ್ ಮುಖಾಂತರ ಹೊರಟಿದ್ದು, ಅವರ ಪ್ರಯಾಣ ಶುಭಕರವಾಗಲಿ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಮಾತನಾಡಿ, ಮೇ 9ರಂದು ನಡೆಯಲಿರುವ ಕಾರ್ಯಕ್ರಮಕ್ಕೆ ರಾಜ್ಯದ ಮೂಲೆ ಮೂಲೆಗಳಿಂದ ಲಕ್ಷಾಂತರ ಜನರು ಕಾರ್ಯಕ್ರಮಕ್ಕೆ ಹೊರಟಿದ್ದು, ಅದೇ ರೀತಿ ಜಿಲ್ಲೆಯಿಂದಲೂ ಬಿ.ಎಸ್. ಯಡಿಯೂರಪ್ಪನವರ ಅಭಿಮಾನಿಗಳು ಕಾರ್ಯಕ್ರಮಕ್ಕೆ ಬಂದು ಯಶಸ್ವಿಗೊಳಿಸಬೇಕೆಂದರು.

ಒಬಿಸಿ ಮೋರ್ಚಾ ರಾಜ್ಯ ಕಾರ್ಯದರ್ಶಿ ಸುಧೀರ್ ಕಾಟಿಗರ್ ಮಾತನಾಡಿ, ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮ ರಾಜ್ಯ ಹಾಗೂ ರಾಷ್ಟ್ರದ ಗಮನ ಸೆಳೆದಿದ್ದು, ಅವರು ಈ ಹಿಂದೆ ಗದಗ ನಗರಕ್ಕೆ ಆಗಮಿಸಿದಾಗ ಅವರು ಸೈಕಲ್ ಮುಖಾಂತರ ಪ್ರವಾಸ ಮಾಡಿ ಸಾಕಷ್ಟು ಗಮನ ಸೆಳೆದಿದ್ದರು. ಜಿಲ್ಲೆಯಲ್ಲಿ ಪಕ್ಷ ಗಟ್ಟಿಯಾಗಲು ಶ್ರಮಿಸಿದರು.

ಅವರ ಹಾದಿಯಲ್ಲಿ ಈಗಿನ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಕೂಡ ಜಿಲ್ಲೆಯಲ್ಲಿಸಾಕಷ್ಟು ಅಭಿಮಾನಿಗಳನ್ನು ಹೊಂದಿದ್ದು, ಅವರ ಅಭಿಮಾನಿ ಕುರ್ತಕೋಟಿ ಗ್ರಾಮದ ಯುವಕ ಪ್ರಭು ಡಿಗ್ಗಾವಿ ಅವರು ಸೈಕಲ್ ಮುಖಾಂತರ ಚಿತ್ರದುರ್ಗಕ್ಕೆ ಹೊರಟಿದ್ದು, ಅವರಿಗೆ ಶುಭವಾಗಲಿ ಎಂದರು.

ಈ ವೇಳೆ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ್ ಪಾಟೀಲ, ಸುರೇಶ್ ಮರಳಪ್ಪನವರ್, ಶಂಕರ್‌ಕಾಕಿ, ಅನಿಲ ಅಬ್ಬಿಗೇರಿ, ರಮೇಶ್ ಸಜ್ಜಗಾರ, ಜಯಶ್ರೀ ಉಫಲಾಟ, ಸಂತೋಷ ಅಕ್ಕಿ, ಬಸವರಾಜ ನರೇಗಲ್, ಇರ್ಷಾ ಮಾನ್ವಿ, ರವಿ ಮಾನ್ವಿ, ಮಂಜುನಾಥ ಶಾಂತಗೇರಿ, ದೇವೇಂದ್ರಪ್ಪ ಹೂಗಾರ, ರವಿ ಚವಾನ, ನಾರಾಯಣ ಟಿಕಂದಾರ್, ಕುಶಾಲ್ ಕಾಟಿಗರ್‌ಸೇರಿದಂತೆ ಬಿಜೆಪಿಯ ಕಾರ್ಯಕರ್ತರು, ಪದಾಧಿಕಾರಿಗಳು ಹಾಗೂ ಯಡಿಯೂರಪ್ಪನವರ ಅಭಿಮಾನಿಗಳು ಇದ್ದರು.



ಗದಗದಿಂದ ಚಿತ್ರದುರ್ಗಕ್ಕೆ ಸೈಕಲ್ ಮೂಲಕ ಬಿ.ವೈ. ವಿಜಯೇಂದ್ರ ಹಾಗೂ ಸುಧೀರ್ ಕಾಟಿಗರ್ ಅಭಿಮಾನಿ ಪ್ರಭು ಡಿಗ್ಗಾವಿ ಹೊರಟಿದ್ದು, ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಕಲ್ಲಯ್ಯಜ್ಜನವರು ಚಾಲನೆ ನೀಡಿದರು.

ಬಿಎಸ್‌ವೈ ಕೊಡುಗೆ ಅಪಾರ

• **ಕನ್ನಡಪ್ರಭ ವಾರ್ತೆ** ಗಜೇಂದ್ರಗಡ

ರೈತರ ಪರ ಹೋರಾಟಗಾರ, ರಾಜ್ಯದಲ್ಲಿ ಮೊಟ್ಟ ಮೊದಲ ಬಾರಿಗೆ ಕೃಷಿ ಬಜೆಟ್ ಮಂಡಿಸಿದ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರ ಕೊಡುಗೆ ಕರ್ನಾಟಕ ರಾಜ್ಯಕ್ಕೆ ಅಪಾರವಾಗಿದೆ ಎಂದು ಮಾಜಿ ಸಚಿವ ಕಳಕಪ್ಪ ಜಿ. ಬಂಡಿ ತಿಳಿಸಿದರು.

ಪಟ್ಟಣದ ಬಿಜೆಪಿ ಕಾರ್ಯಾಲಯದಲ್ಲಿ ಬಿಜೆಪಿ ರೋಣ ಮಂಡಲದ ವತಿಯಿಂದ ಬುಧವಾರ ಸಂಜೆ ಹಮ್ಮಿಕೊಂಡಿದ್ದ ಯಡಿಯೂರಪ್ಪ ಅಭಿಮಾನೋತ್ಸವದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಮೇ 9ರಂದು ಚಿತ್ರದುರ್ಗದಲ್ಲಿ ನಡೆಯುವ ಯಡಿಯೂರಪ್ಪ ಅಭಿಮಾನೋತ್ಸವದಅದ್ಧೂರಿಸಮಾರಂಭದಲ್ಲಿಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ವಾಹನಗಳ ಸ್ಟಿಕರ್ ಹಾಗೂ ಆಮಂತ್ರಣ ಪತ್ರಿಕೆಗಳನ್ನು ಬಿಡುಗಡೆಗೊಳಿಸಿದರು. ಉಮೇಶ ಮಲ್ಲಾಪುರ, ಮುದಿಯಪ್ಪ ಕರಡಿ, ಶಿವಾನಂದ ಮಠದ, ದಾನಪ್ಪ ರಾಥೋಡ, ಬಾಲಾಜಿ ಭೋಸಲೆ, ನೀಲಪ್ಪ ಗುರಿಕಾರ, ಮಾಂತೇಶ ಪೂಜಾರ, ರಂಗನಾಥ ಮೇಟಿ, ಹುಲ್ಲಪ್ಪ ಕೆಂಗಾರ, ಯು. ಆರ್. ಚನ್ನಮ್ಮನವರ, ಭೀಮಪ್ಪ ಮಾದರ, ರವಿ ಸಿಂಗ್ರಿ, ಸಲೀಮ್ ಕಲಾದಗಿ, ಬಸಬರಾಜ ಕಡಬಲಕಟ್ಟಿ ಉಮೇಶ ಅಡನೂರ, ಈರಪ್ಪ ಯರಗೇರಿ, ಮಲ್ಲಪ್ಪ ಕುರಿ, ಲಕ್ಷ್ಮಣ ಬಂಕದ, ಮಹೇಶ ಮಕ್ತಾಲಿ, ಶಂಕರ್‌ಇಂಜನಿ, ಪರಸಪ್ಪ ಪೂಜಾರ, ಸೂಗುರೇಶ ಕಾಜಗಾರ, ಕಿರಣ ಕಟ್ಟಿ ಸೇರಿದಂತೆ ಸೇರಿ ಇತರರು ಇದ್ದರು.



ಗಜೇಂದ್ರಗಡದಲ್ಲಿ ಆಮಂತ್ರಣ ಪತ್ರಿಕೆಗಳನ್ನು ಬಿಡುಗಡೆ ಮಾಡಲಾಯಿತು.


28ರ ವರೆಗೆ ಬೆಂಬಲ ಬೆಲೆಯಡಿ ಕಡಲೆ ಖರೀದಿ ಅವಧಿ ವಿಸ್ತರಣೆ

• **ಕನ್ನಡಪ್ರಭ ವಾರ್ತೆ** ನರಗುಂದ

ಬೆಂಬಲ ಬೆಲೆಯಡಿ ಕಡಲೆ ಖರೀದಿ ಪ್ರಕ್ರಿಯೆಯನ್ನು ಮೇ 28ರ ವರೆಗೆ ವಿಸ್ತರಿಸಲಾಗಿದೆ. ಇದರಿಂದ ರೈತರು ಹರ್ಷ ವ್ಯಕ್ತಪಡಿಸಿದ್ದಾರೆ.

2025- 26ನೇ ಸಾಲಿನ ನಾಫೇಡ್ ಸಂಸ್ಥೆಯ ಅಧಿಕಾರಿಗಳಗೆ ಸರಿಯಾದ ಸಮಯಕ್ಕೆ ತೂಕ ಮಾಡುವ ಗೋಣಿಚೀಲ ಮತ್ತು ಕ್ಯೂ ಆರ್‌ಕೋಡ್ ನಿಗದಿತ ಸಮಯಕ್ಕೆ ಬಾರದೇ ಇರುವುದರಿಂದ ನೂರಾರು ಕಡಲೆ ತೂಕವಾಗದೆ ರೈತರು ತೊಂದರೆಯಲ್ಲಿ ಸಿಲುಕಿದ್ದರು. ಆದರೆ ಸರ್ಕಾರ ನೋಂದಣಿ ಮಾಡಿಸಿ ತೂಕವಾಗದ ನೂರಾರು ರೈತರು ಉಳಿದುಕೊಂಡಿದ್ದನ್ನು ಅರಿತು ಕಡಲೆ ಖರೀದಿ ಅವಧಿಯನ್ನು ಮೇ 28ರ ವರೆಗೆ ಮುಂದವರಿಸಿದ್ದಾರೆ.

ಅಧಿಕಾರಿಗಳಿಗೆ ಪತ್ರ: ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಹಿಂಗಾರು ಹಂಗಾಮಿನ ಕಡಲೆ ಹುಟ್ಟುವಳಿ ಖರೀದಿ ಅವಧಿ ವಿಸ್ತರಣೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳ ಮೂಲಕ ಸಹಕಾರ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರಿಗೆ ಶಾಸಕ ಸಿ.ಸಿ. ಪಾಟೀಲ ಪತ್ರ ಬರೆದು ಆಗ್ರಹಿಸಿದ್ದರು.



F. No. L-15016/114/2025-MPS (179508)
Government of India
Ministry of Agriculture & Farmers Welfare
Department of Agriculture & Farmers Welfare
Krishi Bhawan, New Delhi
Dated 5th May 2026

To,

The Managing Director, NAFED, Sidhartha Enclave, Ring Road, Ashram Chowk, New Delhi-110014

The Managing Director, NCCF, NCUI Complex, 3, Siri Institutional Area, August Kranti Marg, New Delhi-16

Subject: Extension of procurement period of Bengal Gram under Price Support Scheme (PSS) in Karnataka during Rabi 2026 season.

Sir,

I am directed to refer to the letter No. CO 16 1 MRE 2026 dated 18.04.2026, received from Govt. of Karnataka and this Department's letter of even number dated 22.01.2026 wherein this Department had approved for the procurement of 1,01,340 MT of Bengal Gram under Price Support Scheme (PSS) in the state for Rabi 2026 for the period of 90 days from the date of Notification by the State Govt.

ಜಿಲ್ಲಾದ್ಯಂತ 72 ಕಡಲೆ ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. ಈ ಖರೀದಿ ಕೇಂದ್ರಗಳಲ್ಲಿ ಒಟ್ಟು 19133 ರೈತರು ನೋಂದಾಯಿಸಿಕೊಂಡಿದ್ದರು. ಇದರಲ್ಲಿ ಈವರೆಗೆ ಒಟ್ಟು 15510 ಜನ ರೈತರು ಕಡಲೆ ಮಾರಾಟ ಮಾಡಿದ್ದಾರೆ. ಜಿಲ್ಲೆ ಸೇರಿ ಎಲ್ಲ ತಾಲೂಕಿನಲ್ಲಿ 3623 ರೈತರು ಕಡಲೆ ಹುಟ್ಟುವಳಿ ಮಾರಾಟ ಮಾಡಬೇಕಾಗಿದೆ.ಬೆಂಬಲ ಬೆಲೆ ಯೋಜನೆಯಡಿ ರೈತರ ಹಿತದೃಷ್ಟಿಯಿಂದ ಈಗಾಗಲೇ ನೋಂದಣಿ ಆಗಿರುವ ರೈತರ ಕಡಲೆ ಖರೀದಿ ಕಾಲಾವಧಿ ವಿಸ್ತರಿಸಲು ಜಿಲ್ಲಾಧಿಕಾರಿಗಳ ಮೂಲಕ ಸಹಕಾರ ಇಲಾಖೆಯ ಪ್ರಧಾನ ಕಾರ್ಯದರ್ಶಿಗೆ ಕ್ರಮ ಕೈಗೊಳ್ಳಬೇಕೆಂದು ಪತ್ರ ಬರೆಯಲಾಗಿತ್ತು. ಇದಕ್ಕೆ ಸರ್ಕಾರ ಸ್ಪಂದನೆ ಮಾಡಿದ್ದು ಹರ್ಷ ತಂದಿದೆ ಎಂದು ಶಾಸಕ ಸಿ.ಸಿ. ಪಾಟೀಲ ತಿಳಿಸಿದರು. ಕೆಲವು ತಾಂತ್ರಿಕ ತೊಂದರೆಯಿಂದ ರೈತರು ಕಡಲೆ ತೂಕ ಮಾಡಿಸಲು ತೊಂದರೆಯಾಗಿತ್ತು. ಆದರೆ ಸರ್ಕಾರ ಮತ್ತೆ ಕಡಲೆ ತೂಕ ಮಾಡಿಸುವ ಅವಧಿಯನ್ನು ಮುಂದುವರಿಸಿದ್ದಾರೆ. ಈ ಅವಧಿಯಲ್ಲಿ ಎಲ್ಲ ರೈತರು ಕಡಲೆ ತೂಕ ಮಾಡಿಸಬೇಕೆಂದು ಕರ್ನಾಟಕ ರಾಜ್ಯ ಮಾರಾಟ ಮಹಾಮಂಡಳದ ತಾಲೂಕು ವ್ಯವಸ್ಥಾಪಕ ಸಚಿನ ಪಾಟೀಲ ತಿಳಿಸಿದರು.

ಗಾಯಾಳುಗಳಿಗೆ ₹25 ಲಕ್ಷ ಪರಿಹಾರ ನೀಡಲಿ: ಖಾನಪ್ಪನವರ

• **ಕನ್ನಡಪ್ರಭ ವಾರ್ತೆ** ಗದಗ

ತೋಂಟದಾರ್ಯ ಮಠದ ಜಾತ್ರೆಯಲ್ಲಿ ಡ್ಯಾನ್ಸಿಂಗ್ ಜೋಕಾಲಿ ಮುರಿದು ಬಿದ್ದು 22 ಜನರಿಗೆ ಗಾಯಗಳಾಗಿದ್ದು, ಅವರೆಲ್ಲರಿಗೂ ಮೂರು ದಿನದೊಳಗೆ ₹25 ಲಕ್ಷ ಪರಿಹಾರ ನೀಡಬೇಕು. ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಬೇಕು. ಇಲ್ಲದಿದ್ದರೆ ಗಾಯಾಳುಗಳ ಜತೆ ವಿವಿಧ ಹಿಂದೂ ಪರ ಸಂಘಟನೆಗಳ ವತಿಯಿಂದ ಮಠದ ಗದ್ದುಗೆಯ ಮುಂದೆ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ ರಾಜ್ಯ ಸಂಚಾಲಕ ರಾಜು ಖಾನಪ್ಪನವರ ಎಚ್ಚರಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮೇ 2ರಂದು ರಾತ್ರಿ ತೋಂಟದಾರ್ಯ ಮಠದ ಜಾತ್ರೆಯಲ್ಲಿ ಮನರಂಜನೆಗಾಗಿ ಹಾಕಿದ್ದ ಡ್ಯಾನ್ಸಿಂಗ್ ಜೋಕಾಲಿ ಬಿದ್ದು 22 ಜನರಿಗೆ ಗಂಭೀರ ಗಾಯವಾಗಿತ್ತು. ಅದರಲ್ಲಿ ಓರ್ವನ ಸ್ಥಿತಿ ಚಿಂತಾಜನಕವಾಗಿದೆ ಎಂದರು.

> **ಡ್ಯಾನ್ಸಿಂಗ್ ಜೋಕಾಲಿ ಕಳಚಿ ಬಿದ್ದು 22ಕ್ಕೂ ಹೆಚ್ಚು ಜನರಿಗೆ ಗಾಯವಾಗಿದ್ದು, ಈ ಹಿನ್ನೆಲೆ ಸಮಿತಿಯ ಅಧ್ಯಕ್ಷ ವಿನಾಯಕ ಮಾನ್ವಿ ಸೇರಿದಂತೆ ಆರೇಳು ಜನರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಾಗಿದೆ. ಆದರೆ, ಸಮಿತಿಯ ಎಲ್ಲ ಪದಾಧಿಕಾರಿಗಳ ವಿರುದ್ಧ ಪ್ರಕರಣ ದಾಖಲಾಗಬೇಕು. ಅಮಾಯಕ ವಿನಾಯಕ ಮಾನ್ವಿ ಅವರನ್ನೇ ಹೊಣೆ ಮಾಡುವುದು ಸರಿಯಲ್ಲ.**
>
> **ರಾಜು ಖಾನಪ್ಪನವರ** ರಾಜ್ಯ ಸಂಚಾಲಕರು, ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆ

ಓರ್ವ 18 ವರ್ಷದ ಹುಡುಗನ ಸೊಂಟ ಮುರಿದಿದೆ. 6 ವರ್ಷದ ಬಾಲಕನ ತಲೆಗೆ ಪೆಟ್ಟು ಬಿದ್ದಿದೆ. ಇವರೆಲ್ಲರನ್ನು ಜೀಮ್ಸ್ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಆದರೆ, ಆಸ್ಪತ್ರೆಯಲ್ಲಿ ಸಂಪೂರ್ಣ ನಿರ್ಲಕ್ಷ್ಯ ಮಾಡಲಾಗುತ್ತಿದೆ. ರೋಗಿಗಳಿಗೆ ಸರಿಯಾದ ಚಿಕಿತ್ಸೆ ನೀಡುತ್ತಿಲ್ಲ. ಸ್ಕ್ಯಾನಿಂಗ್ ಮಾಡಲು ₹2,500 ಹಣಕ್ಕೆ ಬೇಡಿಕೆ ಇಡುತ್ತಿದ್ದಾರೆ ಎಂದು ಆರೋಪಿಸಿದರು.

ಪೊಲೀಸ್ ಇಲಾಖೆ ಸುಮಾರು 7-8 ಜನರನ್ನು ಅಂದೇ ಆಸ್ಪತ್ರೆಯಿಂದ ಬಿಡುಗಡೆ ಮಾಡಿಸಿದ್ದಾರೆ. ಎಸ್ಪಿ ಅವರು ಈ ಬಗ್ಗೆ ಗಮನ ಹರಿಸಬೇಕು. ಘಟನೆ ನಡೆದು ಮೂರ್ನಾಲ್ಕು ದಿನ ಕಳೆದರೂ ಅನಾಹುತಕ್ಕೆ ಕಾರಣವಾದ ವಸ್ತುಗಳನ್ನು ಇದುವರೆಗೂ ಸೀಜ್ ಮಾಡಿಲ್ಲ. ನೇರವಾಗಿ ಎಸ್ಪಿ ಅವರು ಮಧ್ಯಪ್ರವೇಶಿಸಿ ಡ್ಯಾನ್ಸಿಂಗ್ ಜೋಕಾಲಿ ಸೀಜ್ ಮಾಡಬೇಕು. ಇಲ್ಲದಿದ್ದರೆ ಪೊಲೀಸ್ ಇಲಾಖೆ ವಿರುದ್ಧ ಹೋರಾಟಕ್ಕೆ ಇಳಿಯಬೇಕಾಗುತ್ತದೆ ಎಂದರು. ಮಾದಿಗ ಸಂಘರ್ಷ ಸಮಿತಿಯ ರಾಘವೇಂದ್ರ ಪರಾಪೂರ, ಮಹೇಶ ರೋಖಡೆ, ಪಿ.ಎಸ್. ಕಾಳೆ, ವಿಶ್ವನಾಥ ಶಿರಿ, ಗೀತಾ ನವಲಗುಂದ, ಸುಮನ್ ನವಲಗುಂದ, ಕುಮಾರ ನಡಗೇರಿ, ಸತೀಶ್ ಕುಂಬಾರ, ರಮೇಶ ನವಲಗುಂದ, ಮಂಜು ನವಲಗುಂದ, ಶಂಕರ ಗಬ್ಬೂರ, ವಿಜಯ ದಲಬಂಜನ್, ಕಿರಣ್ ಕಬಾಡಿ ಸೇರಿದಂತೆ ಹಲವರು ಇದ್ದರು.

ಸಾಂತ್ವನ ಕೆ.ಎಚ್. ಪಾಟೀಲ ಜಿಲ್ಲಾಸ್ಪತ್ರೆಗೆ ಸಂಕನೂರ ಭೇಟಿ

ಗಾಯಾಳುಗಳಿಗೆ ಸಂಕನೂರ ಸಾಂತ್ವನ

• **ಕನ್ನಡಪ್ರಭ ವಾರ್ತೆ ಗದಗ**

ಇತ್ತೀಚೆಗೆ ತೋಂಟದಾರ್ಯ ಜಾತ್ರಾ ಮಹೋತ್ಸವದಲ್ಲಿ ಆಕಸ್ಮಿಕವಾಗಿ ಡ್ಯಾನ್ಸಿಂಗ್ ಪ್ಲೇ ಜೋಕಾಲಿ ಆಡುವ ಸಂದರ್ಭದಲ್ಲಿ ತಾಂತ್ರಿಕ ದೋಷ ಉಂಟಾಗಿ ದುರ್ಘಟನೆ ನಡೆದು ಸುಮಾರು 18 ಜನ ಗಾಯಗೊಂಡು ನಗರದ ಕೆ.ಎಚ್. ಪಾಟೀಲ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆಗೆ ಒಳಗಾದವರನ್ನು ಭೇಟಿ ಮಾಡಿ ಆರೋಗ್ಯದ ಸ್ಥಿತಿಗತಿ ಕುರಿತು ವಿಚಾರಿಸಿ ಗಾಯಾಳುಗಳಿಗೆ ಸಾಂತ್ವನ ಹೇಳಿದರು. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ 18 ಗಾಯಾಳುಗಳಲ್ಲಿ ಇಬ್ಬರಿಗೆ ಮಾತ್ರ ಹೆಚ್ಚಿನ ಚಿಕಿತ್ಸೆ ಮಾಡಬೇಕಾಗಿದ್ದು, ಉಳಿದವರನ್ನು 3- 4 ದಿನಗಳಲ್ಲಿ ಡಿಸ್ಚಾರ್ಜ್ ಮಾಡುವುದಾಗಿ ಆಸ್ಪತ್ರೆಯ ನಿರ್ದೇಶಕ ಬಸವರಾಜ ಬೊಮ್ಮನಹಳ್ಳಿ ತಿಳಿಸಿದರು. ಗಾಯಾಳುಗಳಿಗೆ ಚಿಕಿತ್ಸೆ ನೀಡುತ್ತಿರುವ ಎಲುಬು ಕೀಲು ವೈದ್ಯ ಮಹಾಂತೇಶ ಪಾಟೀಲ ಹಾಗೂ ಜನರಲ್ ಸರ್ಜನ್ ಸುನೀಲ ತೇಲಕರ ಜತೆ ಮಾತನಾಡಿ, ಹೆಚ್ಚಿನ ಕಾಳಜಿ ವಹಿಸಿ ಚಿಕಿತ್ಸೆ ನೀಡಲು ಮನವಿ ಮಾಡಿದರು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ನಗರಾಭಿವೃದ್ಧಿ ಮಾಜಿ ಅಧ್ಯಕ್ಷ ಸಿದ್ದಣ್ಣ ಪಲ್ಲೇದ, ರಮೇಶ ಸಜ್ಜಗಾರ, ವಕೀಲರಾದ ಕೆ.ಪಿ. ಕೋಟಿಗೌಡ್ರ, ಅಮರನಾಥ ಗಡಗಿ ಹಾಗೂ ರವಿ ಮಾನ್ವಿ ಇದ್ದರು.



ಗಾಯಾಳುಗಳಿಗೆ ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಸಾಂತ್ವನ ಹೇಳಿದರು.

ಮಳೆಗೆ ಪ್ರಾರ್ಥಿಸಿ ಗೊಜನೂರು ಗ್ರಾಮಸ್ಥರಿಂದ ದೇವರ ಮೊರೆ



ಮಳೆಗೆ ಪ್ರಾರ್ಥಿಸಿ ಗೊಜನೂರು ಗ್ರಾಮಸ್ಥರು ಭಜನೆ ಮಾಡಿದರು.

• **ಕನ್ನಡಪ್ರಭ ವಾರ್ತೆ** ಲಕ್ಷ್ಮೇಶ್ವರ

ಬೇಸಿಗೆ ಹಂಗಾಮು ಮುಗಿಯುತ್ತ ಬಂದರೂ ಮುಂಗಾರುಪೂರ್ವ ಮಳೆ ಬಾರದೆ ಇರುವುದರಿಂದ ವರುಣದೇವ ಕೃಪೆಗಾಗಿ ಗೊಜನೂರು ಗ್ರಾಮದ ರೈತಾಪಿ ವರ್ಗದ ಜನರು ದೇವರ ಮೊರೆ ಹೋಗಿದ್ದಾರೆ.

ಮಂಗಳವಾರ ಗೊಜನೂರು ಗ್ರಾಮದ ಜನರು ಭಜನೆ ಮಾಡುತ್ತ ಗ್ರಾಮದ ಎಲ್ಲ ದೇವರಿಗೆ ನೀರಿನ ಅಭಿಷೇಕ ಮಾಡಿ, ಮಳೆಗಾಗಿ ಪ್ರಾರ್ಥಿಸಿದರು. ಮಹಿಳೆಯರು ಹಾಗೂ ಮಕ್ಕಳು ತಲೆ ಮೇಲೆ ನೀರಿನ ಕೊಡಗಳನ್ನು ಹೊತ್ತು ದೇವರ ಗುಡಿಗಳಿಗೆ ಹೋಗಿ ದೇವರಿಗೆ ಜಲಾಭಿಷೇಕ ಮಾಡಿ, ಪೂಜೆ ಮಾಡಿದರು. ಉತ್ತಮ ಮಳೆಯಾಗಲೆಂದು ಮಳೆರಾಯನಲ್ಲಿ ಬೇಡಿಕೊಂಡರು. ಆನಂತರ ಅನ್ನ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ಬೇಸಿಗೆ ಹಂಗಾಮು ಮುಗಿಯುತ್ತ ಬಂದರೂ ಮಳೆ ಬಾರದೇ ಇರುವುದರಿಂದ ರೈತರು ಭೂಮಿಯ ಹದ ಮಾಡಿಕೊಳ್ಳುವ ಕ್ರಿಯೆಗೆ ಹಿನ್ನಡೆಯಾಗಿದೆ. ಈ ವರ್ಷ ವಾಡಿಕೆಗಿಂತ ಕಡಿಮೆ ಮಳೆಯಾಗುವುದೆಂಬ ಹವಾಮಾನ ಇಲಾಖೆಯ ಎಚ್ಚರಿಕೆ ರೈತರಲ್ಲಿ ಮತ್ತಷ್ಟು ಆತಂಕ ಉಂಟು ಮಾಡಿದೆ.

ಈಗಾಗಲೆ ಭೂಮಿಯನ್ನು ಹರಗಿ, ರಂಟೆ ಹೊಡೆದು, ಗೊಬ್ಬರ ಹಾಕಿ ಭೂಮಿಯ ಫಲವತ್ತತೆ ಹೆಚ್ಚು ಮಾಡುವಲ್ಲಿ ರೈತರು ನಿರತರಾಗಿದ್ದಾರೆ. ಪ್ರತಿ ವರ್ಷ ಇಷ್ಟೊತ್ತಿಗಾಗಲೆ ಮುಂಗಾರು ಪೂರ್ವ ಮಳೆ ಸುರಿದು ರೈತರ ಕೃಷಿ ಚಟುವಟಿಕೆಗೆ ಅನುಕೂಲ ಕಲ್ಪಿಸುತ್ತಿತ್ತು. ಆದರೆ ಈ ವರ್ಷ ಮಳೆರಾಯ ಭೂಮಿಯತ್ತ ಇಣುಕಿ ನೋಡುತ್ತಲೇ ಇಲ್ಲ.

ಪ್ರತಿಭಾ ಪುರಸ್ಕಾರ ಪಡೆಯಲು ಅರ್ಜಿ ಆಹ್ವಾನ

ಗದಗ: ಎಸ್ಸೆಸ್ಸೆಲ್ಸಿ ಮತ್ತು ಸಿಬಿಎಸ್‌ಸಿ, ಪಿಯುಸಿಯಲ್ಲಿ ಶೇ. 95ರಷ್ಟು ಅಂಕ ಪಡೆದ ಗದುಗಿನ ವಿವೇಕಾನಂದ ನಗರದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲು ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯಿಂದ ಅರ್ಜಿ ಆಹ್ವಾನಿಸಿದೆ.

ಅರ್ಜಿಯನ್ನು ವಿವೇಕಾನಂದ ನಗರದ ಕಾಶಿ ವಿಶ್ವನಾಥ ದೇವಸ್ಥಾನದ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ಕಾರ್ಯಾಲಯಕ್ಕೆ ಮೇ 12ರೊಳಗೆ ನೀಡಬೇಕು. ಹೆಚ್ಚಿನ ಮಾಹಿತಿ ಮತ್ತು ಅರ್ಜಿ ಸಲ್ಲಿಕೆಗೆ ಬಿ.ಎಚ್. ಗರಡಿಮನಿ ಮೊ. 9448059273, ವಿ.ಆರ್. ಕುಲಕರ್ಣಿ ಮೊ. 9449925045 ಇವರನ್ನು ಸಂಪರ್ಕಿಸಬಹುದು.

ಮೇ 16ರಂದು ಸಂಜೆ ಕಾಶಿ ವಿಶ್ವನಾಥ ದೇವಸ್ಥಾನದಲ್ಲಿ ಸಮಿತಿಯಿಂದ ಜರುಗುವ ಜೀವನ ದರ್ಶನ ಕಾರ್ಯಕ್ರಮದಲ್ಲಿ ಪ್ರತಿಭಾ ಪುರಸ್ಕಾರ ನೀಡಲಾಗುವುದು ಎಂದು ಸಮಿತಿಯ ಅಧ್ಯಕ್ಷ ಎ.ಟಿ. ನರೇಗಲ್ಲ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

'ಕಾಂಗ್ರೆಸ್ಸಿಗರು ಶೋಕಾಚರಣೆ ಮಾಡಬೇಕಿತ್ತು'

ಗದಗ: ಐದು ರಾಜ್ಯಗಳ ಚುನಾವಣೆಯ ಫಲಿತಾಂಶವನ್ನು ನೋಡಿ ಕಾಂಗ್ರೆಸ್ಸಿಗರು ಬೂಟಾಟಿಕೆಯ ವಿಜಯೋತ್ಸವ ಮಾಡಿ ಅಪಹಾಸ್ಯಕ್ಕೀಡಾಗಿದ್ದಾರೆ ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ತಿಳಿಸಿದ್ದಾರೆ.



ಪ್ರಕಟಣೆ ನೀಡಿರುವ ಅವರು, ಕಾಂಗ್ರೆಸ್ಸಿನ ಪರಿಸ್ಥಿತಿ ನೋಡಿ ಕಾಂಗ್ರೆಸಿಗರು ಶೋಕಾಚರಣೆ ಮಾಡಬೇಕಾಗಿತ್ತು. ಅದನ್ನು ಬಿಟ್ಟು ವಿಜಯೋತ್ಸವ ಮಾಡಿರುವುದು ಹಾಸ್ಯಾಸ್ಪದ. ಪಶ್ಚಿಮ ಬಂಗಾಳದಲ್ಲಿ ಬೆರಳೆಣಿಕೆಯ ಸ್ಥಾನಗಳನ್ನು ಗೆದ್ದು ಅಸ್ಸಾಂ ಹಾಗೂ ಪುದುಚೇರಿಯಲ್ಲಿದ್ದ ಅಧಿಕಾರವನ್ನು ಕಳೆದುಕೊಂಡು ಹೇಳಲು ಹೆಸರು ಇಲ್ಲದಂತಹ ಪಕ್ಷ ಕಾಂಗ್ರೆಸ್. ಕೇರಳದಲ್ಲಿ ಆಡಳಿತ ವಿರೋಧಿ ಅಲೆಗೆ ಆ ರಾಜ್ಯದ ಜನತೆಗೆ ಬೇರೆ ಆಯ್ಕೆ ಇಲ್ಲದೆ ಕಾಂಗ್ರೆಸ್‌ಗೆ ಮತ ನೀಡಿದ್ದಾರೆ ಹೊರತು ಕಾಂಗ್ರೆಸ್ ಮೇಲಿನ ಪ್ರೀತಿಗಲ್ಲ. ಇಂಡಿ ಮೈತ್ರಿ ಕೂಟದ ಮಿತ್ರರು ಎಂದು ಚುನಾವಣೆ ಪೂರ್ವದಲ್ಲಿ ಬೊಬ್ಬೆ ಹೊಡೆದ ಡಿಎಂಕೆ ಹಾಗೂ ಕಾಂಗ್ರೆಸ್ ಈಗ ಬೇರೆ ಬೇರೆ ಹಾದಿ ತುಳಿದಿದೆ. ಕಾಂಗ್ರೆಸ್ ತಮಿಳುನಾಡಿನಲ್ಲಿ ಐದು ಸೀಟುಗಳನ್ನು ಗೆದ್ದು ಪ್ರಾದೇಶಿಕ ಪಕ್ಷವಾದ ಟಿವಿಕೆಯ ಸಂಸ್ಥಾಪಕ ದಳಪತಿ ವಿಜಯ್ ಅವರಿಗೆ ಬೆಂಬಲ ಘೋಷಿಸಿ ಕಾಂಗ್ರೆಸ್ಸಿನ ಪರಿಸ್ಥಿತಿ ಎದ್ದು ತೋರುತ್ತದೆ ಎಂದು ತಿಳಿಸಿದ್ದಾರೆ.

